# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 495 |
| ಸದಸ್ಯರ ಹೆಸರು | : | ಶ್ರೀ.ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 05.02.2021 |
| ಉತ್ತರಿಸುವ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ರಾಜ್ಯದಲ್ಲಿ ಎಷ್ಟು ಪಶು ಆಸ್ಪತ್ರೆಗಳಿವೆ;</td><td>ರಾಜ್ಯದಲ್ಲಿ ಒಟ್ಟು 4212 ಪಶುವೈದ್ಯಕೀಯ ಸಂಸ್ಥೆಗಳಿದ್ದು, ಸಂಸ್ಥೆಗಳ ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ.<br><table><tr><th>ಪಾಲಿ ಕ್ಲಿನಿಕ್</th><th>ಪಶು ಆಸ್ಪತ್ರೆ</th><th>ಪಶು ಚಿಕಿತ್ಸಾಲಯ</th><th>ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ</th><th>ಸಂಚಾರಿ ಪಶು ಚಿಕಿತ್ಸಾಲಯ</th><th>ಒಟ್ಟು</th></tr><tr><td>30</td><td>665</td><td>2135</td><td>1206</td><td>176</td><td>4212</td></tr></table></td></tr>
<tr><td>ಆ)</td><td>ಇದರಲ್ಲಿ ಸ್ವಂತ ಕಟ್ಟಡಗಳು ಇಲ್ಲದೆ ಇರುವ ಆಸ್ಪತ್ರೆಗಳು ಎಷ್ಟು; (ವಿವರ ನೀಡುವುದು)</td><td>ಒಟ್ಟು 200 ಪಶುವೈದ್ಯ ಸಂಸ್ಥೆಗಳಿಗೆ ಸ್ವಂತ ಕಟ್ಟಡಗಳು ಇರುವುದಿಲ್ಲ</td></tr>
<tr><td>ಇ)</td><td>ಸದರಿ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲಾಗುವುದು ಯಾವಾಗ;</td><td>ಆರ್.ಐ.ಡಿ.ಎಫ್ ಯೋಜನೆಯಡಿ ಪಶುವೈದ್ಯ ಸಂಸ್ಥೆಗಳ ಸ್ವಂತ ಕಟ್ಟಡ ನಿರ್ಮಾಣಕ್ಕೆ ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.</td></tr>
<tr><td>ಈ)</td><td>ಒಟ್ಟು ಮಂಜೂರಾದ ಪಶುವೈದ್ಯರ ಹುದ್ದೆಗಳೆಷ್ಟು;</td><td>ಪಶುಸಂಗೋಪನೆ ಇಲಾಖೆಯಲ್ಲಿ ವಿವಿಧ ವೃಂದದ ಒಟ್ಟು 3317 ಪಶುವೈದ್ಯರ ಹುದ್ದೆಗಳ ಮಂಜೂರಾತಿ ಇದ್ದು, ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ.<br><table><tr><th>ಕ್ರ. ಸಂ</th><th>ಹುದ್ದೆ</th><th>ಮಂ</th><th>ಭರ್ತಿ</th><th>ಖಾಲಿ</th></tr><tr><td>1</td><td>ಮುಖ್ಯ ಪಶುವೈದ್ಯಾಧಿಕಾರಿ</td><td>715</td><td>770</td><td rowspan="3">ಸದರಿ 03 ವೃಂದಗಳು ಸೇರಿ ಒಟ್ಟು 1240 ಹುದ್ದೆಗಳು ಖಾಲಿ ಇರುತ್ತವೆ.</td></tr><tr><td>2.</td><td>ಹಿರಿಯ ಪಶುವೈದ್ಯಾಧಿಕಾರಿ</td><td>1000</td><td>553</td></tr><tr><td>3.</td><td>ಪಶುವೈದ್ಯಾಧಿಕಾರಿ</td><td>1602</td><td>754</td></tr><tr><td></td><td>ಒಟ್ಟು</td><td>3317</td><td>2077</td><td>1240</td></tr></table></td></tr>
<tr><td>ಉ)</td><td>ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು;</td><td>ಹಿಂದಿನ ನೇಮಕಾತಿ ಪ್ರಕ್ರಿಯೆಯ ನಂತರ ಇಲ್ಲಿಯವರೆಗೆ ಅಕಾಲಿಕ ಮರಣ/ನಿವೃತ್ತಿ/ಸ್ವಯಂ ನಿವೃತ್ತಿ ಹೊಂದಿದ ನಂತರ ಖಾಲಿ ಉಳಿದಿರುವ ಒಟ್ಟು ಹುದ್ದೆಗಳ ಸಂಖ್ಯೆ: 1240</td></tr>
</table>

| | | |
|---|---|---|
| ಊ) | ಯಾವಾಗ ಭರ್ತಿ ಮಾಡಲಾಗುವುದು? | ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ ಖಾಲಿ ಇರುವ ಮುಖ್ಯ ಪಶುವೈದ್ಯಾಧಿಕಾರಿ (ಆಡಳಿತ) ಹಾಗೂ ಮುಖ್ಯ ಪಶುವೈದ್ಯಾಧಿಕಾರಿ ಮತ್ತು ಹಿರಿಯ ಪಶುವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ಪಶುವೈದ್ಯಾಧಿಕಾರಿ ಹುದ್ದೆಯಿಂದ ಕಾಲಮಿತಿ ಪದೋನ್ನತಿ/ಮುಂಬಡ್ತಿ ಮುಖಾಂತರ ತುಂಬಲು ಕ್ರಮವಹಿಸಲಾಗಿದೆ ಹಾಗೂ ಇಲಾಖೆಯಲ್ಲಿ ಖಾಲಿ ಇರುವ 639 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮುಖಾಂತರ ಭರ್ತಿ ಮಾಡುವ ಪ್ರಸ್ತಾವನೆಗೆ ಪ್ರಸ್ತುತ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯ ಸಹಮತಿ ನೀಡಿರುವುದಿಲ್ಲ, ಆದುದರಿಂದ ಆರ್ಥಿಕ ಇಲಾಖೆಯ ಮುಂದಿನ ಆದೇಶದವರೆಗೂ ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿರುತ್ತದೆ.<br><br>ಮುಂದುವರೆದು, 371 (ಜೆ) ರಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 61 ಪಶುವೈಧ್ಯಾಧಿಕಾರಿ ಹುದ್ದೆಗಳನ್ನು, ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಆದರೆ ಆರ್ಥಿಕ ಇಲಾಖೆಯು ದಿನಾಂಕ: 06.07.2020 ರ ಸುತ್ತೋಲೆಯಲ್ಲಿ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ 2020-21 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ-ಕರ್ನಾಟಕ ಭಾಗದ ಹುದ್ದೆಗಳು ಹಾಗೂ ಬ್ಯಾಕ್ ಲಾಗ್ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯುವಂತೆ ತಿಳಿಸಿರುತ್ತದೆ. ಆದುದರಿಂದ ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೂ ತಡೆ ಹಿಡಿಯಲಾಗಿರುತ್ತದೆ. |

ಸಂ: ಪಸಂಮೀ ಇ-14 ಪಸಸೇ 2021

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು